# ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು

(ಕರ್ನಾಟಕ ಸರ್ಕಾರದ ಅಧೀನದ ಸ್ವಾಯತ್ತ ಸಂಸ್ಥೆ)

ವಿಕ್ಟೋರಿಯಾ ಆಸ್ಪತ್ರೆ ಆವರಣ, ಕೋಟೆ, ಬೆಂಗಳೂರು –560 002.

www.karunadu.gov.in/gdcrib. & Email-gdcribangalore@gmail.com ☎:26705053/26703176.


ಸಂಖ್ಯೆ:ಸದಂಕಾಸಂಸಂ/ಸಿ(1)/13/2017–18

ನಿರ್ದೇಶಕರು ಮತ್ತು ಡೀನ್ ರವರ ಕಾರ್ಯಾಲಯ,
ದಿನಾಂಕ:21.06.2018

## ಸುತ್ತೋಲೆ

ವಿಷಯ:– ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ವಿವಿಧ ವಿಭಾಗಗಳಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಂದಿರುವ ಅರ್ಜಿಗಳನ್ನು ಪರಿಶೀಲಿಸಲಾಗಿದ್ದು, ಅದರಲ್ಲಿ ತಿರಸ್ಕೃತವಾಗಿರುವ ಅರ್ಜಿಗಳ ಕುರಿತು

ಉಲ್ಲೇಖ:– ಈ ಸಂಸ್ಥೆಯ ಅಧಿಸೂಚನೆ ಸಂಖ್ಯೆ:ಸದಂಕಾಸಂಸಂ/ಸಿ(1)/13/2017–18 ದಿನಾಂಕ:17.11.2017 ಮತ್ತು 29.11.2017

---***---

ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಈ ಸ್ವಾಯತ್ತ ಸಂಸ್ಥೆಯ ವಿವಿಧ ವಿಭಾಗಗಳಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿಗೆ ಉಲ್ಲೇಖಿತ ದಿನಾಂಕದ ಅಧಿಸೂಚನೆಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ ಅಧಿಸೂಚನೆಗೆ ಪ್ರತಿಕ್ರಿಯಿಸಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಶೀಲಿಸಲಾಗಿದ್ದು, ಈ ಪತ್ರದ ಜೊತೆ ಲಗತ್ತಿಸಿರುವ ಅಭ್ಯರ್ಥಿಗಳ ಅರ್ಜಿಗಳು ಅವರ ಹೆಸರಿನ ಮುಂದೆ ತಿಳಿಸಿರುವ ಕಾರಣಗಳಿಂದಾಗಿ ತಿರಸ್ಕೃತಗೊಂಡಿರುತ್ತವೆ.

ಉಲ್ಲೇಖಿತ ಅಧಿಸೂಚನೆಯಲ್ಲಿಯ ಕ್ರಮ ಸಂಖ್ಯೆ 24ರಲ್ಲಿ ಈಗಾಗಲೇ ತಿಳಿಸಿದಂತೆ ಸಂಸ್ಥೆಯ ವೆಬ್‌ಸೈಟ್ **https://www.karnataka.gov.in/gdcrib/pages/home.aspx** ನಲ್ಲಿ ನೇಮಕಾತಿ ಮುಂದಿನ ಪ್ರಕ್ರಿಯೆಗಳನ್ನು ತಿಳಿಸಲಾಗುವುದೆಂದು ನಮೂದಿಸಲಾಗಿದೆ. ಅದರಂತೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ತಿರಸ್ಕೃತ ಅರ್ಜಿಗಳ ಪಟ್ಟಿಯನ್ನು ಪರಿಶೀಲಿಸಿ ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿರುತ್ತದೆ.

ಸದರಿ ಅಭ್ಯರ್ಥಿಗಳು ಅರ್ಜಿಗಳು ತಿರಸ್ಕೃತಗೊಂಡಿರುವ ಸಂಬಂಧ ಆಕ್ಷೇಪಣೆಗಳಿದ್ದರೆ ಸೂಕ್ತ ದಾಖಲಾತಿಗಳೊಂದಿಗೆ ಈ ಸುತ್ತೋಲೆ ಹೊರಡಿಸಿದ ದಿನಾಂಕದಿಂದ 10 (ಹತ್ತು) ದಿನಗಳೊಳಗಾಗಿ ಡೀನ್ ಕಮ್ ನಿರ್ದೇಶಕರು, ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಇವರಿಗೆ ಲಿಖಿತವಾಗಿ ಮನವಿ ಸಲ್ಲಿಸತಕ್ಕದ್ದು. ನಿಗಧಿತ ಅವಧಿಯ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಡೀನ್ ಮತ್ತು ನಿರ್ದೇಶಕರು,
ಸರ್ಕಾರಿ ದಂತ ಕಾಲೇಜು ಮತ್ತು
ಸಂಶೋಧನಾ ಸಂಸ್ಥೆ, ಬೆಂಗಳೂರು

**ಪ್ರತಿಯನ್ನು:**

1) ಸಂಸ್ಥೆಯ ಸೂಚನಾ ಫಲಕ.
2) ಸಂಸ್ಥೆಯ ವೆಬ್‌ಸೈಟ್.
3) ಕಡತದ ಪ್ರತಿ.